**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು.**

**ಸಂಖ್ಯೆ: ಸಿ7(2)/ಪ್ರಾ.ಶಿಅ/ಪೂ.ಪ್ರಾ.ಶಾ.15/2017-18** **ದಿನಾಂಕ: 11-05-2017**

**ಸುತ್ತೋಲೆ**

ವಿಷಯ: ಖಾಸಗಿ ಅನುದಾನರಹಿತ ಪೂರ್ವ ಪ್ರಾಥಮಿಕ ಶಾಲೆಗಳನ್ನು ನೋಂದಾಯಿಸಲು ನೋಂದಣಿ ಪ್ರಾಧಿಕಾರಿಗಳು ಸರ್ಕಾರದ ಮಾರ್ಗಸೂಚಿಗಳನ್ನು ಉಲ್ಲಂಘಿಸುತ್ತಿರುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ], ಶಿಕ್ಷಣ ಇಲಾಖೆ ರವರ ಅರೆ ಸರ್ಕಾರಿ ಪತ್ರ ದಿನಾಂಕ:6-5-2017
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.369.ಪಿಜಿಸಿ.2014, ದಿನಾಂಕ:11-11-2014
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.512.ಪಿಜಿಸಿ.2015, ದಿನಾಂಕ:18-1-2016
4. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.512.ಪಿಜಿಸಿ.2016, ದಿನಾಂಕ:25-07-2016
5. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.118.ಪಿಜಿಸಿ.2017, ದಿನಾಂಕ:27-02-2017
6. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.118.ಪಿಜಿಸಿ.2017, ದಿನಾಂಕ:18-03-2017

******

ಖಾಸಗಿ ಪೂರ್ವ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.369.ಪಿಜಿಸಿ.2014, ದಿನಾಂಕ:11-11-2014ರಲ್ಲಿ ಹೊರಡಿಸಲಾದ ಅಧಿಸೂಚನೆಯನ್ನು ರದ್ದುಪಡಿಸಿ ಕರ್ನಾಟಕ ಶಿಕ್ಷಣ ಅಧಿನಿಯಮ-1983 ಸೆಕ್ಷನ್-30 ಮತ್ತು ಸೆಕ್ಷನ್-31 ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು [ವರ್ಗೀಕರಣ ಮತ್ತು ನೋಂದಣಿ] ನಿಯಮ-1997 ರ ನಿಯಮ-3ರನ್ವಯ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.512.ಪಿಜಿಸಿ.2015, ದಿನಾಂಕ:18-01-2016ರಲ್ಲಿ ಮಾರ್ಗಸೂಚಿಗಳನ್ನು ಸರಳೀಕರಿಸಿ ನಿಗಧಿಪಡಿಸಲಾಗಿದೆ.

ಉಲ್ಲೇಖ[3]ರ ಅಧಿಸೂಚನೆಯ ಪ್ರಕಾರ ರಾಜ್ಯದಲ್ಲಿ ಸಂಘಗಳ ನೋಂದಣಿ ಆಕ್ಟ್/ಟ್ರಸ್ಟ್ ಆಕ್ಟ್/ಕಂಪನಿ ಆಕ್ಟ್ ನಂತಹ ಕಾನೂನುಗಳಿಗೆ ಅನುಗುಣವಾದ ಯಾವುದೇ ಒಂದು ಸಂಸ್ಥೆಯು ಪೂರ್ವ ಪ್ರಾಥಮಿಕ ಶಾಲೆಯನ್ನು ಸ್ಥಾಪಿಸಲು ನೋಂದಣಿಯನ್ನು ಅಪೇಕ್ಷಿಸಬಹುದಾಗಿದೆ. ಹಾಗೂ ಉಲ್ಲೇಖ [4]ರ ಸುತ್ತೋಲೆಯಲ್ಲಿ ಸಹಾ ಸಲ್ಲಿಸಬೇಕಾದ ದಾಖಲೆಗಳನ್ನು ಸಹಾ ನಿಗಧಿಪಡಿಸಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.617.ಪಿಜಿಸಿ.2015, ದಿನಾಂಕ:23-12-2015ರ ಪ್ರಕಾರ ಪೂರ್ವ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳೇ ನೋಂದಣಿ ಪ್ರಾಧಿಕಾರಿಗಳಾಗಿರುತ್ತಾರೆ. ಉಲ್ಲೇಖ[3]ರ ಅಧಿಸೂಚನೆಯನ್ವಯ ಅಪೇಕ್ಷಿತ ಆಡಳಿತ ಮಂಡಳಿಗಳು ಪೂರ್ವ ಪ್ರಾಥಮಿಕ ಶಾಲೆಯನ್ನು ತೆರೆಯಲು ಪ್ರಸ್ತಾವನೆಯನ್ನು ಸಲ್ಲಿಸಿದಲ್ಲಿ ನೋಂದಣಿ ಪ್ರಾಧಿಕಾರಿಗಳಾದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಅನವಶ್ಯಕ ಆಕ್ಷೇಪಣೆಗಳು ಹಾಗೂ ಉಲ್ಲೇಖ [2]ರ ಅಧಿಸೂಚನೆಯಲ್ಲಿ ನಿಗಧಿಪಡಿಸಿದ ಷರತ್ತುಗಳನ್ನು ಪೂರೈಸಿರುವುದಿಲ್ಲವೆಂದು ಪ್ರಸ್ತಾವನೆಗಳನ್ನು ತಿರಸ್ಕರಿಸಿ ಗೊಂದಲಗಳನ್ನು ಸೃಷ್ಟಿ ಮಾಡಿರುವುದನ್ನು ಗಮನಿಸಲಾಗಿದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.118.ಪಿಜಿಸಿ.2017, ದಿನಾಂಕ:27-02-2017ರಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿ ಕಡ್ಡಾಯವಲ್ಲದ ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.171.ಪಿಜಿಸಿ.2006, ದಿನಾಂಕ:5-10-2006ರ ಸುತ್ತೋಲೆಯನ್ನು ರದ್ದುಪಡಿಸಿ ಪೂರ್ವ ಪ್ರಾಥಮಿಕ ಶಾಲೆಗಳಿಗೆ ನೋಂದಣಿಯನ್ನು ಕಡ್ಡಾಯಗೊಳಿಸಲಾಗಿದೆ. ಅನುಮತಿ ಇಲ್ಲದೆ ನಡೆಯುತ್ತಿರುವ ಪ್ರತ್ಯೇಕ ಪೂರ್ವ ಪ್ರಾಥಮಿಕ ಶಾಲೆಗಳು ಸೇರಿದಂತೆ ಹೊಸ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕಾಲಾವಧಿಯನ್ನು ದಿನಾಂಕ:15-6-2017ರವರೆಗೆ ವಿಸ್ತರಿಸಿ ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.118.ಪಿಜಿಸಿ.2017, ದಿನಾಂಕ:18-3-2017ರ ಪ್ರಕಾರ ನಿಗಧಿಪಡಿಸಲಾಗಿದೆ.

ಹೊಸ ಪೂರ್ವ ಪ್ರಾಥಮಿಕ ಶಾಲೆಗಳ ನೋಂದಣಿಗೆ ಸಂಬಂಧಿಸಿದಂತೆ ಉಲ್ಲೇಖ [2]ರ ದಿನಾಂಕ:11-11-2014ರ ಅಧಿಸೂಚನೆಯಲ್ಲಿ ನಿಗಧಿಪಡಿಸಲಾದ ಯಾವುದೇ ಷರತ್ತುಗಳನ್ನು ಇನ್ನಿತರ ಅಂಶಗಳನ್ನು ಪರಿಗಣಿಸತಕ್ಕದ್ದಲ್ಲ. ಖಾಸಗಿ ಪೂರ್ವ ಪ್ರಾಥಮಿಕ ಶಾಲೆಗಳಿಗೆ ಉಲ್ಲೇಖ [3] ಮತ್ತು [4]ರಲ್ಲಿ ನಿಗಧಿಪಡಿಸಿರುವ ಮಾರ್ಗಸೂಚಿಗಳನ್ವಯವೆ ಪರಿಶೀಲಿಸಿ ಅನುಮತಿ ನೀಡಬೇಕಾಗಿದೆ. ಈ ಅಧಿಸೂಚನೆ ಮತ್ತು ಸುತ್ತೋಲೆಯಲ್ಲಿ ನಿಗಧಿಪಡಿಸಿರುವ ದಾಖಲೆಗಳನ್ನು ಹೊರತುಪಡಿಸಿ ಬೇರೆ ಯಾವುದೇ ದಾಖಲೆಗಳನ್ನು ನೋಂದಣಿ ಪ್ರಾಧಿಕಾರಿಗಳಾದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಆಡಳಿತ ಮಂಡಳಿಯವರಿಂದ ಅಪೇಕ್ಷಿಸಕೂಡದು.

ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ನೋಂದಣಿ ಪ್ರಾಧಿಕಾರಿಗಳು ಖಾಸಗಿ ಅನುದಾನ ರಹಿತ ಹೊಸ ಪೂರ್ವ ಪ್ರಾಥಮಿಕ ಶಾಲಾ ನೋಂದಣಿ ಕುರಿತಂತೆ ಸಲ್ಲಿಕೆಯಾಗುವ ಪ್ರಸ್ತಾವನೆಗಳನ್ನು ಉಲ್ಲೇಖ[3] ಮತ್ತು [4]ರಲ್ಲಿ ವಿಧಿಸಿರುವ ಮಾರ್ಗಸೂಚಿಗಳನ್ವಯ ಪರಿಶೀಲಿಸಿ ನೋಂದಣಿ ನೀಡಲು ತ್ವರಿತ ಕ್ರಮವಹಿಸತಕ್ಕದ್ದು. ಒಂದು ವೇಳೆ ಅನವಶ್ಯಕವಾಗಿ ಉಲ್ಲೇಖ [3] ಮತ್ತು [4]ರ ಸುತ್ತೋಲೆಗಳನ್ನು ಉಲ್ಲಂಘಿಸಿ ಪ್ರಸ್ತಾವನೆಯನ್ನು ತಿರಸ್ಕರಿಸುವುದು ಅನವಶ್ಯಕವಾಗಿ ಆಡಳಿತ ಮಂಡಳಿಯಿಂದ ಹೆಚ್ಚುವರಿ ಮಾಹಿತಿಗಳನ್ನು ಅಪೇಕ್ಷಿಸುವುದು ಕಂಡುಬಂದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳಡಿಯಲ್ಲಿ ಸಂಬಂಧಿಸಿದ ನೋಂದಣಿ ಪ್ರಾಧಿಕಾರಿಯ ವಿರುದ್ಧ ಶಿಸ್ತು ಕ್ರಮವನ್ನು ಜರುಗಿಸಲಾಗುವುದು ಎಂದು ತಿಳಿಯಪಡಿಸಿದೆ. ಹಾಗೂ ಈ ಸಂಬಂಧ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರುಗಳು ಅನುಪಾಲನೆ ಮಾಡಿ ಅಗತ್ಯ ಕ್ರಮಕೈಗೊಳ್ಳಲು ಸಹಾ ನಿರ್ದೇಶಿಸಿದೆ.

[ಸೌಜನ್ಯ ಭಾ.ಆ.ಸೇ]
ಆಯುಕ್ತರು
11/5/17

ಗೆ,

1. ರಾಜ್ಯದ ಎಲ್ಲಾ ಉಪ ನಿರ್ದೇಶಕರುಗಳಿಗೆ ತ್ವರಿತ ಹಾಗೂ ಸೂಕ್ತ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತ್ವರಿತ ಹಾಗೂ ಸೂಕ್ತ ಕ್ರಮಕ್ಕಾಗಿ,

ಪ್ರತಿಯನ್ನು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, [ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ], ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1. ರವರ ಮಾಹಿತಿಗಾಗಿ.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲ್ಬರ್ಗಾ ಆಯುಕ್ತಾಲಯ ರವರಿಗೆ ಸೂಕ್ತ ಕ್ರಮಕ್ಕಾಗಿ.